# Akashvani : Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

19.01.2026 18.40 hrs

***************

ಮುಖ್ಯಾಂಶಗಳು

- ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ; ನೈಜ ಮತದಾರರು ಪಟ್ಟಿಯಿಂದ ಹೊರಗುಳಿಯಬಾರದು-ಮುಖ್ಯಮಂತ್ರಿ ಸಿದ್ದರಾಮಯ್ಯ
- ನಂಜನಗೂಡು ರಸಬಾಳೆ, ಮೈಸೂರು ವೀಳ್ಯದೆಲೆ, ಇಂಡಿ ನಿಂಬೆ ಮೊದಲ ಬಾರಿಗೆ ಮಾಲ್ಡೀವ್ಸ್ ರಫ್ತು
- ಚಾರ್ಮಾಡಿ ಘಾಟ್ ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚು; ಅಪಾರ ಪ್ರಮಾಣದ ಅರಣ್ಯ ನಾಶ
- ಮಂಗಳೂರಿನಲ್ಲಿಂದು ಕರಾವಳಿ ಚಲನಚಿತ್ರೋತ್ಸವಕ್ಕೆ ಚಾಲನೆ

***************

ಚುನಾವಣಾ ಆಯೋಗ ನಡೆಸುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ವಿಚಾರದಲ್ಲಿ ಕಾಂಗ್ರೆಸ್ ಎಂದಿಗೂ ರಾಜಕೀಯ ಮಾಡುವುದಿಲ್ಲ. ಆದರೆ ನೈಜ ಮತದಾರರು ಪಟ್ಟಿಯಿಂದ ಹೊರಗುಳಿಯಬಾರದು ಎಂಬುದಷ್ಟೇ ನಮ್ಮ ಕಾಳಜಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್ಐಆರ್ ಪ್ರಕ್ರಿಯೆ ಎಚ್ಚರಿಕೆಯಿಂದ ನಡೆಯಬೇಕಿದ್ದು, ಯಾವುದೇ ಮತದಾರರಿಗೆ ಅನ್ಯಾಯವಾಗದಂತೆ ಕಾರ್ಯನಿರ್ವಹಿಸಬೇಕು ಎಂದು ಬಿಎಲ್ಓ ಗಳಿಗೆ ಸೂಚಿಸಲಾಗಿದೆ ಎಂದರು.

ಡಿಜಿಪಿ ರಾಮಚಂದ್ರರಾವ್ ಅವರ ಮೇಲಿನ ಆರೋಪದ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಈ ಪ್ರಕರಣದ ಬಗ್ಗೆ ವಿಚಾರಣೆ ನಡೆಸಿ, ಡಿಜಿಪಿಯವರ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಉನ್ನತಮಟ್ಟದ ಅಧಿಕಾರಿಯೂ ಕಾನೂನಿಗಿಂತ ದೊಡ್ಡವರಲ್ಲ ಎಂದು ತಿಳಿಸಿದರು.

ಇದಕ್ಕೂ ಮುನ್ನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಮೆಯನ್ನು ಲೋಕಾರ್ಪಣೆಗೊಳಿಸಿದರು ಹಾಗೂ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

***************

ಭೌಗೋಳಿಕ ಸೂಚ್ಯಂಕ-ಜಿಐ ಮಾನ್ಯತೆ ಪಡೆದ ರಾಜ್ಯದ ಹೆಮ್ಮೆಯ ನಂಜನಗೂಡು ರಸಬಾಳೆ, ಮೈಸೂರು ವೀಳ್ಯದೆಲೆ ಮತ್ತು ಇಂಡಿ ನಿಂಬೆ ಹಣ್ಣುಗಳು ಮೊದಲ ಬಾರಿಗೆ ಮಾಲ್ಡೀವ್ಸ್‌ಗೆ ರಫ್ತಾಗಿವೆ.

ಇದೇ ೧೫ ರಂದು ಈ ಐತಿಹಾಸಿಕ ರಫ್ತು ಪ್ರಕ್ರಿಯೆಗೆ ಚಾಲನೆ ನೀಡಲಾಗಿದ್ದು, ಇದು ಭಾರತದ ಕೃಷಿ ಉತ್ಪನ್ನಗಳ ಅಂತಾರಾಷ್ಟ್ರೀಯ ಮಾರುಕಟ್ಟೆ ವಿಸ್ತರಣೆಯಲ್ಲಿ ಹೊಸ ಮೈಲಿಗಲ್ಲಾಗಿದೆ.

ಕೇಂದ್ರ ಸರ್ಕಾರದ ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಸರ್ಕಾರದ ತೋಟಗಾರಿಕೆ ಇಲಾಖೆ ಹಾಗೂ ಐಸಿಎಆರ್ ಸಂಸ್ಥೆಗಳ ಸಮನ್ವಯದೊಂದಿಗೆ ಈ ರಫ್ತು ಕಾರ್ಯ ಯಶಸ್ವಿಯಾಗಿದೆ. ಮೈಸೂರು ಮತ್ತು ವಿಜಯಪುರ ಜಿಲ್ಲೆಗಳ ರೈತರಿಂದ ನೇರವಾಗಿ ಉತ್ಪನ್ನಗಳನ್ನು ಖರೀದಿಸಿ, ಜಾಗತಿಕ ಗುಣಮಟ್ಟಕ್ಕೆ ಅನುಗುಣವಾಗಿ ರಫ್ತು ಮಾಡಲಾಗಿದೆ.

***************

ಬಾದಾಮಿಯ ಐತಿಹಾಸಿಕ ಪರಂಪರೆಯನ್ನು ಪ್ರತಿಬಿಂಬಿಸುವ ಚಾಲುಕ್ಯ ಉತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಿಂದ ಚಾಲುಕ್ಯ ಉತ್ಸವ ನಡೆಯದೆ ಉಳಿದಿತ್ತು. ಬಜೆಟ್ ಭರವಸೆಯಂತೆ ಇದೀಗ ಉತ್ಸವವನ್ನು ಪುನಃ ಆಯೋಜಿಸಿರುವುದು ಹೆಮ್ಮೆಯ ವಿಚಾರ. ಐತಿಹಾಸಿಕ ಮಹತ್ವ ಹೊಂದಿರುವ ಬಾದಾಮಿಯ ಪರಂಪರೆಯನ್ನು ರಾಜ್ಯದ ಜನತೆಗೆ ಪರಿಚಯಿಸುವ ಉದ್ದೇಶದಿಂದ ಈ ಉತ್ಸವಕ್ಕೆ ಸರ್ಕಾರ ಬೆಂಬಲ ನೀಡಿದೆ ಎಂದು ಹೇಳಿದರು.

ಇನ್ನೊಂದೆಡೆ, ಮೇಣದಬಸವಿಗೆ ಸಂಪರ್ಕಿಸುವ ರಸ್ತೆಯ ಅಭಿವೃದ್ಧಿಗೆ ಪ್ರವಾಸೋದ್ಯಮ ಸಚಿವರು ಅನುಮೋದನೆ ನೀಡಿದ್ದು, ಶೀಘ್ರದಲ್ಲೇ ಯೋಜನೆ ಜಾರಿಗೆ ಬರಲಿದೆ ಎಂದು ಅವರು ಭರವಸೆ ನೀಡಿದರು.

***************

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಚಾರ್ಮಾಡಿ ಘಾಟ್ ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚು ಉಂಟಾಗಿದ್ದು, ಅಪಾರ ಪ್ರಮಾಣದ ಅರಣ್ಯ ನಾಶವಾಗಿದೆ.

ಇಲ್ಲಿನ ಮಲಯ ಮಾರುತ ಅರಣ್ಯ ಪ್ರದೇಶದಲ್ಲಿ ಕಾಡಿಗೆ ಬೆಂಕಿ ಹೊತ್ತಿಕೊಂಡಿದ್ದು, ಸುಮಾರು ೨ ಕಿಲೋ ಮೀಟರ್‌ಗಳಿಗೂ ಹೆಚ್ಚಿನ ಪ್ರದೇಶದಲ್ಲಿ ಬೆಂಕಿ ವ್ಯಾಪಿಸಿದೆ.

ಸ್ಥಳಕ್ಕೆ ಅರಣ್ಯಾಧಿಕಾರಿಗಳು, ಅಗ್ನಿ ಶಾಮಕ ದಳದ ಸಿಬ್ಬಂದಿ ಧಾವಿಸಿದ್ದು, ಬೆಂಕಿ ನಂದಿಸುವ ಕಾರ್ಯದಲ್ಲಿ ನಿರತರಾಗಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಅರಣ್ಯ ಅಧಿಕಾರಿಗಳು ಗಾಳಿಯಿಂದ ಬೆಂಕಿ ವ್ಯಾಪಿಸುತ್ತಿದ್ದು, ಸಾಕಷ್ಟು ಕಡೆ ಬೆಂಕಿ ನಂದಿಸಲಾಗಿದೆ. ಅಪಾರ ಪ್ರಮಾಣದ ಸಸ್ಯ ಸಂಕುಲ, ಪ್ರಾಣಿ, ಪಕ್ಷಿಗಳು ಬೆಂಕಿಯಿಂದ ನಾಶವಾಗಿರುವ ಸಾಧ್ಯತೆ ಇದೆ. ಕಾಡ್ಗಿಚ್ಚಿಗೆ ನಿಖರ ಕಾರಣ ತಿಳಿದುಬಂದಿಲ್ಲ. ಈ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಜಿ ರಾಮ್ ಜಿ ಯೋಜನೆಯು ಪಾರದರ್ಶಕವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದ್ದಾರೆ.

ಚಿಕ್ಕಮಗಳೂರು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ಇದ್ದ ನರೇಗಾ ಯೋಜನೆಯಲ್ಲಿ ಕಾಂಗ್ರೆಸ್ ಪಕ್ಷವು ಭ್ರಷ್ಟಾಚಾರಕ್ಕೆ ಅವಕಾಶ ನೀಡಿತ್ತು. ಕಾರ್ಮಿಕರ ಶ್ರೇಯೋಭಿವೃದ್ಧಿಗೆ ಬಳಕೆಯಾಗಬೇಕಿದ್ದ ಹಣ ಭ್ರಷ್ಟರ ಪಾಲಾಗುತಿತ್ತು ಎಂದು ಆರೋಪಿಸಿದ ಅವರು, ಜಿ ರಾಮ್ ಜಿ ಯೋಜನೆ ಮೂಲಕ ಕೇಂದ್ರ ಸರ್ಕಾರ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿದೆ ಎಂದರು.

ಈ ಯೋಜನೆ ಮೂಲಕ ಗ್ರಾಮೀಣ ಭಾಗದಲ್ಲಿ ಸಾರ್ವಜನಿಕರಿಗೆ ಉಪಯೋಗವಾಗುವಂತಹ ಕಾಮಗಾರಿಗಳು ನಡೆಯಲಿವೆ. ಗ್ರಾಮೀಣ ಭಾಗದಲ್ಲಿ ಸಾರ್ವಜನಿಕ ಆಸ್ತಿ ನಿರ್ಮಾಣಕ್ಕೆ ಸಹಕಾರಿ ಎಂದುಸಿ.ಟಿ.ರವಿ ಹೇಳಿದರು.

***************

ಕೋಲಾರ ಜಿಲ್ಲೆಯ ಕೆಜಿಎಫ್‌ನಲ್ಲಿ ಪೊಲೀಸ್ ತರಬೇತಿ ಅಕಾಡೆಮಿ ಸ್ಥಾಪನೆಯಾಗಲಿದ್ದು, ಗೃಹ ಸಚಿವ ಡಾ.ಜಿ.ಪರಮೇಶ್ವರ್ ನಾಳೆ ಗುದ್ದಲಿ ಪೂಜೆ ನೆರವೇರಿಸಲಿದ್ದಾರೆ ಎಂದು ಕೆಜಿಎಫ್ ಶಾಸಕಿ ಎಂ.ರೂಪಕಲಾ ಶಶಿಧರ್ ತಿಳಿಸಿದ್ದಾರೆ.

ಕೋಲಾರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶ ಹಾಗೂ ರಾಜ್ಯದ ಜನತೆಯ ಭವಿಷ್ಯದ ದೃಷ್ಟಿಯಿಂದ ಸಾವಿರಾರು ಕೋಟಿ ರೂಪಾಯಿ ವೆಚ್ಚದಲ್ಲಿ ಹಂತ ಹಂತವಾಗಿ ತರಬೇತಿ ಕೇಂದ್ರವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಯೋಜನೆ ರೂಪಿಸಿದೆ. ಈ ಅಕಾಡೆಮಿಯಲ್ಲಿ ಪ್ರತಿವರ್ಷ ಒಂದು ಸಾವಿರ ಪೊಲೀಸರಿಗೆ ತರಬೇತಿ ನೀಡಲಾಗುತ್ತದೆ ಎಂದು ತಿಳಿಸಿದರು.

ನಾಳೆ ನಡೆಯಲಿರುವ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎಸ್.ಸುರೇಶ್, ಸಂಸದ ಎಂ.ಮಲ್ಲೇಶ್ ಬಾಬು, ಕೋಲಾರ ಜಿಲ್ಲೆಯ ಶಾಸಕರು, ಪರಿಷತ್ ಸದಸ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

***************

ಕರಾವಳಿ ಉತ್ಸವದ ಅಂಗವಾಗಿ ದಕ್ಷಿಣ ಕನ್ನಡ ಜಿಲ್ಲಾಡಳಿತದ ವತಿಯಿಂದ ಇದೇ ೨೧ರವರೆಗೆ ಮಂಗಳೂರಿನ ಭಾರತ್ ಸಿನೆಮಾಸ್ ಚಿತ್ರಮಂದಿರದಲ್ಲಿ ಆಯೋಜಿಸಿರುವ ಕರಾವಳಿ ಚಲನ ಚಿತ್ರೋತ್ಸವಕ್ಕೆ ಇಂದು ಚಿತ್ರನಟ ರಾಜ್ ಬಿ ಶೆಟ್ಟಿ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಕಾಣುತ್ತಿದೆ. ಇದಕ್ಕೆ ಇಲ್ಲಿನ ಚಲನಚಿತ್ರ ಕ್ಷೇತ್ರದ ಕೊಡುಗೆಯೂ ಇದೆ. ಹೀಗಾಗಿ, ಕರಾವಳಿಯಲ್ಲಿ ಸಿನಿಮಾ ಕ್ಷೇತ್ರದ ಬೆಳವಣಿಗೆಗೆ ಪೂರಕವಾಗಿ ದೊಡ್ಡ ಸ್ಟುಡಿಯೊ ನಿರ್ಮಾಣದಂತಹ ಯೋಜನೆ ಜಾರಿಗೆ ಸರ್ಕಾರ

ಯೋಚಿಸಬೇಕಾಗಿದೆ. ಸ್ಟುಡಿಯೊ ನಿರ್ಮಾಣ ಯೋಜನೆಯು ಹೆಸರಿಗಷ್ಟೇ ಆಗಿರದೆ, ಸ್ಥಳೀಯರಿಗೆ ಉದ್ಯೋಗ ನೀಡುವ ವೇದಿಕೆಯಾಗಬೇಕು ಎಂದು ಅವರು ಒತ್ತಾಯಿಸಿದರು.

***************

ಇಂದು ಕವಿ ಹಾಗೂ ದಾರ್ಶನಿಕ ಯೋಗಿ ವೇಮನರ ಜಯಂತಿ. ಈ ಹಿನ್ನೆಲೆಯಲ್ಲಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕ ಗಣ್ಯರು ಗೌರವ ಸಲ್ಲಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ವೇಮನರು ಜಾತಿಯಾಧಾರಿತ ಅಸ್ಪೃಶ್ಯತೆ, ಅಂಧಶ್ರದ್ಧೆ ಮುಂತಾದ ಸಾಮಾಜಿಕ ಪಿಡುಗುಗಳ ವಿರುದ್ಧ ಸರಳ ಭಾಷೆಯಲ್ಲಿ ಜಾಗೃತಿ ಮೂಡಿಸಿ, ಸುಧಾರಣೆಯ ಹಾದಿಯಲ್ಲಿ ಸಮಾಜವನ್ನು ಮುನ್ನಡೆಸಿದರು ಎಂದು ಹೇಳಿದ್ದಾರೆ.

ಕೆಲವೇ ಜನರ ಹಿತಕ್ಕಾಗಿ ಬಹುಜನರು ಶೋಷಣೆಗೊಳಪಡುವ ವರ್ಣವ್ಯವಸ್ಥೆ ಅಳಿದು, ಪ್ರತಿ ವ್ಯಕ್ತಿಗೂ ಶೋಷಣೆ ರಹಿತ ಘನತೆಯ ಬದುಕು ಸಿಗಬೇಕು ಎನ್ನುವುದು ವೇಮನರ ಆಶಯವಾಗಿತ್ತು. ಇಂತಹ ಮಹಾನ್ ಚೇತನಗಳು ಹಾಕಿಕೊಟ್ಟ ತಳಪಾಯದ ಮೇಲೆ ಸಮಸಮಾಜದ ಸುಂದರ ಸೌಧವನ್ನು ಕಟ್ಟಬೇಕಿರುವುದು ನಮ್ಮೆಲ್ಲರ ಹೊಣೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಗದಗ್‌ನಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಮಹಾಯೋಗಿ ಶ್ರೀ ವೇಮನ ಅವರ ೬೧೪ನೇ ಜಯಂತ್ಯುತ್ಸವ ಜರುಗಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ವಿಶ್ವವಿದ್ಯಾಲಯದ ಕುಲಸಚಿವ ಸುರೇಶ್ ನಾಡಗೌಡರ ಮಾತನಾಡಿ, ಮಹಾಯೋಗಿ ವೇಮನ ಅವರ ಚಿಂತನೆಗಳು ಆತ್ಮಪರಿಶೀಲನೆಯ ದಾರಿಯಲ್ಲಿ ಮುನ್ನಡೆಸುತ್ತವೆ. ಸಮಾಜದಲ್ಲಿ ಕಂದಾಚಾರ, ಅಸಮಾನತೆ ಮತ್ತು ಅಜ್ಞಾನವನ್ನು ನಿವಾರಿಸಲು ದಾರ್ಶನಿಕರ ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಅಭಿಪ್ರಾಯಪಟ್ಟರು.

***************

ಮಂಗಳೂರು ರಾಸಾಯನಿಕ ಮತ್ತು ರಸಗೊಬ್ಬರ ಕಾರ್ಖಾನೆ-ಎಂಸಿಎಫ್ ಹೆಸರನ್ನು ಇದೀಗ ಪ್ಯಾರಾದೀಪ್ ಪಾಸ್ಫೇಟ್ಸ್ ಲಿಮಿಟೆಡ್ ಎಂಬುದಾಗಿ ಬದಲಾಯಿಸಿರುವುದು ಖಂಡನೀಯ. ಕೂಡಲೇ ಎಂಸಿಎಫ್ ಹೆಸರನ್ನೇ ಮರಳಿ ಇಡಬೇಕು ಎಂದು ವಿಧಾನಪರಿಷತ್ ಸದಸ್ಯ ಐವನ್ ಡಿಸೋಜ ಒತ್ತಾಯಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಂಸಿಎಫ್ ಎಂಬುದು ಮಂಗಳೂರಿನ ಅಸ್ಮಿತೆ. ಆ ಹೆಸರನ್ನು ಮರು ಸ್ಥಾಪನೆ ಮಾಡುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಕೂಡಲೇ ಮಧ್ಯಪ್ರವೇಶಿಸಬೇಕು ಎಂದು ಆಗ್ರಹಿಸಿದರು.

ಎಂಸಿಎಫ್ ಕಾರ್ಖಾನೆ ೧೯೭೧ರಲ್ಲಿ ಜಂಟಿ ಉದ್ಯಮವಾಗಿ ಅಸ್ತಿತ್ವಕ್ಕೆ ಬಂದು ೫೫ ವರ್ಷ ಕಳೆದಿದೆ. ೧೫ ವರ್ಷ ಸರ್ಕಾರಿ ಒಡೆತನದಲ್ಲಿದ್ದು, ೩೫ ವರ್ಷ ಖಾಸಗಿ ಒಡೆತನದಲ್ಲಿದ್ದರೂ ಮಂಗಳೂರು ರಾಸಾಯನಿಕ ಮತ್ತು ರಸಗೊಬ್ಬರ ಕಾರ್ಖಾನೆ ಎಂಬ ಹೆಸರು ಬದಲಾಗಿರಲಿಲ್ಲ. ಏಕಾಏಕಿ ಹೆಸರು ಬದಲಾವಣೆ ಮಾಡಿದ್ದು, ಮಂಗಳೂರಿನ ಅಸ್ಮಿತೆಯನ್ನು ಪ್ರಶ್ನೆ ಮಾಡಿದಂತಾಗಿದೆ. ಈ ಕುರಿತು ವಿಧಾನ ಪರಿಷತ್‌ನಲ್ಲೂ ಧ್ವನಿ ಎತ್ತುವುದಾಗಿ ಐವನ್ ಡಿಸೋಜ ತಿಳಿಸಿದರು.

*******ಮುಕ್ತಾಯ*******